**<u>ದಿನಾಂಕಃ 06-03-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನವನ್ನು ಭೋದಿಸಲಾಯಿತು.</u>**

**<u>ಮುಂದುವರೆದ ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದಃ</u>**

| | | |
|---|---|---|
| ನಿ.ಪಿ-7 | : | ಬಿಡುಗಡೆ ಪ್ರಮಾಣ ಪತ್ರ |
| ನಿ.ಪಿ-8 | : | ಅಂಗನ್ಯೂನ್ಯತೆ ಪ್ರಮಾಣ ಪತ್ರ, |
| ನಿ.ಪಿ-9 | : | ಒಟ್ಟು 3 ಎಕ್ಸರೆ ಪಿಲ್ಮ್‌ಗಳು |
| ನಿ.ಪಿ-10 | : | ಆಧಾರ ಕಾರ್ಡ್‌ನ ನೋಟರೈಜ್ಡ ಪ್ರತಿ, (ಮೂಲ ಪ್ರತಿಯೊಂದಿಗೆ ತಾಳೆ ಮಾಡಿ ಹಿಂದಿರುಗಿಸಲಾಗಿದೆ) |
| ನಿ.ಪಿ-11 | : | ಪಾನ್ ಕಾರ್ಡ್‌ನ ನೋಟರೈಜ್ಡ ಪ್ರತಿ, (ಮೂಲ ಪ್ರತಿಯೊಂದಿಗೆ ತಾಳೆ ಮಾಡಿ ಹಿಂದಿರುಗಿಸಲಾಗಿದೆ) |
| ನಿ.ಪಿ-12 | : | ಬ್ಯಾಂಕ್ ಪಾಸ್ ಬುಕ್ ನ ನೋಟರೈಜ್ಡ ಪ್ರತಿ, (ಮೂಲ ಪ್ರತಿಯೊಂದಿಗೆ ತಾಳೆ ಮಾಡಿ ಹಿಂದಿರುಗಿಸಲಾಗಿದೆ) |

ಎಂದು ಗುರುತಿಸಲಾಯಿತು.

ಅರ್ಜಿಯಲ್ಲಿ ಕೋರಿ ಕೊಂಡಂತೆ ಆದೇಶ ಆಗಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**<u>ಪಾಟೀ ಸವಾಲುಃ</u>** 1 ನೇ ಎದುರುದಾರರ ಪರ ವಕೀಲರನ್ನು ಪದೇ-ಪದೇ ಕೂಗಿ ಕರೆಯಿಸಲಾಗಿ, ಗೈರು ಹಾಜರು ಇರುವುದರಿಂದ ಪಾಟೀ ಸವಾಲು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು .

**<u>ಪಾಟೀ ಸವಾಲುಃ 2 ನೇ ಎದುರುದಾರರ ಪರ ಶ್ರೀ.ಆರ್.ಎಸ್.ಎಸ್.ವಕೀಲರಿಂದಃ</u>**

1. ನಾನು ಬಸ್ ನಲ್ಲಿ ಹೋಗುತ್ತಿದ್ದೆನು. ಎದುರಿನಿಂದ ಲಾರಿ ಬಂದು ಬಸ್ ಗೆ ಡಿಕ್ಕಿ ಪಡಿಸಿರುತ್ತದೆ. ಅಪಘಾತ ವಾದ ತಕ್ಷಣ ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆ ಗೆ ನನ್ನನ್ನು ಕರೆದುಕೊಂಡು ಹೋಗಿ ದಾಖಲಿಸಿರುತ್ತಾರೆ. ಅಪಘಾತ ಮದ್ಯಾಹ್ನ 1.30 ಸುಮಾರಿಗೆ ಆಗಿರುತ್ತದೆ. ಅಪಘಾತ ಆದ ಮಾರನೆ ದಿನ ಮದ್ಯಾಹ್ನ ನಾನು ಆಸ್ಪತ್ರೆಗೆ ಹೋಗಿ ದಾಖಲಾಗಿರುತ್ತೇನೆ. ಆಸ್ಪತ್ರೆಯಲ್ಲಿ ನಾನು ಒಟ್ಟು 13 ದಿನ ಒಳರೋಗಿಯಾಗಿ ದಾಖಲಾಗಿದ್ದೆನು. ಅಪಘಾತ ಹೊಸನಗರದಿಂದ ನಗರ ರಸ್ತೆಯಲ್ಲಿ ಆಗಿದ್ದು ಅದು ಅರಣ್ಯ ಪ್ರದೇಶ ಆಗಿರುತ್ತದೆ ಆದ್ದರಿಂದ ಮಾರನೆ ದಿನ ನಾನು ಆಸ್ಪತ್ರೆಗೆ

ಹೋಗಿರುತ್ತೇನೆ. ಸ್ಥಳಕ್ಕೆ ಅಂಬುಲೆನ್ಸ ಬಂದಿರುವುದಿಲ್ಲ ಕಾರಿನಲ್ಲಿ ಹೋಗಿರುತ್ತೇನೆ.

2. ಅಪಘಾತದಲ್ಲಿ ನನ್ನ ಬಲಭುಜ, ಬಲಚಪ್ಪೆ ಹಾಗೂ ಬಲಗಾಲಿಗೆ ಪೆಟ್ಟಾಗಿರುತ್ತದೆ. ಅಪಘಾತದಲ್ಲಿ ನನಗೆ ಯಾವುದೆ ಮೂಳೆ ಮುರಿತ ಆಗಿರದ ಕಾರಣ ಮಾರನೆ ದಿನ ಆಸ್ಪತ್ರೆಗೆ ಹೋಗಿ ತೋರಿಸಿರುತ್ತೇನೆ ಎಂದರೆ ಸರಿಯಲ್ಲ. ಮೆಗ್ಗಾನ್ ಆಸ್ಪತ್ರೆಯಲ್ಲಿ ನಾನು ಒಳರೋಗಿಯಾಗಿ ಚಿಕಿತ್ಸೆ ಪಡೆದಿಲ್ಲ ಎಂದರೆ ಸರಿಯಲ್ಲ. ನಿಪಿ-7 ಡಿಸ್ಚಾರ್ಜ ಸಮರಿಯನ್ನು ಈ ಕೇಸಿಗೋಸ್ಕರ ಸೃಷ್ಠಿ ಮಾಡಿ ಹಾಜರು ಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನಿಪಿ-7 ಡಿಸ್ಚಾರ್ಜ ಸಮರಿಯನ್ನು ಕೈಯಲ್ಲಿ ಬರೆಯಿಸಿ ಸೃಷ್ಠಿ ಮಾಡಿ ಹಾಜರು ಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಯಾವುದೆ ಮೂಳೆ ಮುರಿತ ಆಗಿಲ್ಲ, ಕೇವಲ ಸಾದಾ ಸ್ವರೂಪದ ಗಾಯಗಳು ಆಗಿವೆ ಎಂದರೆ ಸರಿಯಲ್ಲ. ಚಿಕಿತ್ಸೆ ಕೊಡದ ವೈದ್ಯರಿಂದ ನಿಪಿ-8 ಸುಳ್ಳು ಅಂಗನ್ಯೂನ್ಯತೆ ಪ್ರಮಾಣ ಪತ್ರ ತಂದು ಹಾಜರು ಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಕೇಸ್ ಶೀಟ್ ಹಾಜರು ಪಡಿಸಲು ತೊಂದರೆ ಇರುವುದಿಲ್ಲ. ಮೆಗ್ಗಾನ್ ಆಸ್ಪತ್ರೆಯಿಂದ ಡಿಸ್ಚಾರ್ಜ ಆದ ನಂತರ ಬೇರೆ ಎಲ್ಲೂ ನಾನು ಒಳರೋಗಿಯಾಗಿ ಚಿಕಿತ್ಸೆ ಪಡೆದಿರುವುದಿಲ್ಲ. ನನ್ನ ಚಿಕಿತ್ಸೆಗಾಗಿ ರೂ.2,80,000/- ಓಡಾಟದ ಸಲುವಾಗಿ ರೂ.50, 000/- ಖರ್ಚು ಮಾಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆ ಬಗ್ಗೆ ಯಾವುದೆ ದಾಖಲೆ ಹಾಜರು ಪಡಿಸಿಲ್ಲ ಎಂದರೆ ಸರಿ. ಇನ್ನು ಹೆಚ್ಚಿನ ಚಿಕಿತ್ಸೆಗಾಗಿ ರೂ.1,20,000/- ಬೇಕು ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

3. ನಾನು ಪಂಪಾನಗರದಿಂದ ಬಂದಿರುತ್ತೇನೆ. ಅಪಘಾತದಲ್ಲಿ ನನಗೆ ಸಾದಾ ಗಾಯ ಆಗಿದ್ದರಿಂದ ನಾನು ಈಗ ಸಂಪೂರ್ಣವಾಗಿ ಗುಣಮುಖವಾಗಿರುತ್ತೇನೆ ಎಂದರೆ ಸರಿಯಲ್ಲ. ಲಾರಿ ಚಾಲಕ ತನ್ನ ಲಾರಿಯನ್ನು ಬಹಳ ನಿಧಾನವಾಗಿ ಚಲಾಯಿಸುತ್ತಿದ್ದು ಅಪಘಾತಕ್ಕೆ ಆತನ ತಪ್ಪು ಏನು ಇಲ್ಲ ಎಂದರೆ ಸರಿಯಲ್ಲ. ನಾನು ಪ್ರಯಾಣಿಸುತ್ತಿದ್ದ ಬಸ್ ಚಾಲಕನ ತಪ್ಪಿನಿಂದಲೆ ಈ ಅಪಘಾತ ಆಗಿದೆ ಎಂದರೆ ಸರಿಯಲ್ಲ. ಅಪಘಾತ ದ ಸಮಯದಲ್ಲಿ ಲಾರಿಯ ಚಾಲಕನಿಗೆ ಚಾಲನಾ ಪರವಾನಿಗೆ ಇರಲಿಲ್ಲ ಎಂದರೆ ಸಾಕ್ಷಿ ಅದರ ಬಗ್ಗೆ ಮಾಹಿತಿ ಇಲ್ಲ ಎಂದು ಹೇಳುತ್ತಾರೆ. ಅದೇ ರೀತಿ ಸದರಿ ಲಾರಿಗೆ ಫರ್ಮಿಟ್ ಮತ್ತು ಎಫ್‌ಸಿ ಇರಲಿಲ್ಲ ಎಂದರೆ ಸಾಕ್ಷಿ ನನಗೆ ಮಾಹಿತಿ ಇಲ್ಲ ಎಂದು ಹೇಳುತ್ತಾರೆ.

4. ಪಂಪಾನಗರದಲ್ಲಿ ನಾನು ನನ್ನ ಮಗಳ ಮನೆಯಲ್ಲಿ ವಾಸವಾಗಿರುತ್ತೇನೆ ಆ ಬಗ್ಗೆ ಯಾವುದೆ ದಾಖಲಾತಿ ಹಾಜರು ಪಡಿಸಿರುವುದಿಲ್ಲ. ಯಾವುದೆ ದಾಖಲೆ ಹಾಜರು ಪಡಿಸದೆ ಪಂಪಾನಗರದಲ್ಲಿ ವಾಸವಾಗಿದ್ದೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಅಪಘಾತ ಶಿವಮೊಗ್ಗ ಜಿಲ್ಲೆಯಲ್ಲಿ ಆಗಿದ್ದು ಹಾಗೂ ನಾನು ಸೊರಬ ತಾಲೂಕಿನ ಖಾಯಂ ವಾಸಿಯಾಗಿರುವುದರಿಂದ

ಈ ನ್ಯಾಯಾಲಯಕ್ಕೆ ಈ ಅರ್ಜಿ ಸಲ್ಲಿಸಲು ಬರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಹುಟ್ಟಿದ ದಿನಾಂಕ 01-01-1963 ಎಂದರೆ ಸರಿ. ಅಪಘಾತದ ಸಮಯದಲ್ಲಿ ನನಗೆ 66 ವರ್ಷ ವಯಸ್ಸಾಗಿತ್ತು ಎಂದರೆ ಸಾಕ್ಷಿ 56 ವರ್ಷ ವಯಸ್ಸಾಗಿತ್ತು ಎಂದು ಹೇಳುತ್ತಾರೆ. ಮೆಗ್ಗಾನ್ ಆಸ್ಪತ್ರೆಯ ಮೂಲ ಎಕ್ಸರೆ ಹಾಜರು ಪಡಿಸಲು ತೊಂದರೆ ಇರುವುದಿಲ್ಲ. ನಾನು ಈಗ ಹಾಜರು ಪಡಿಸಿರುವ ಎಕ್ಸರೆ ನನಗೆ ಸಂಬಂಧಿಸಿದ್ದಲ್ಲ ಎಂದರೆ ಸರಿಯಲ್ಲ. ಕಾಲಮಿತಿ ಒಳಗೆ ಈ ಅರ್ಜಿ ಸಲ್ಲಿಸದ ಕಾರಣ ನನ್ನ ಅರ್ಜಿ ಊರ್ಜಿತವಾಗುವುದಿಲ್ಲ ಎಂದರೆ ಸರಿಯಲ್ಲ. ಮನೆಗೆಲಸ ಮತ್ತು ಬಳೆ ವ್ಯಾಪಾರದಿಂದ ತಿಂಗಳಿಗೆ ರೂ.30 ಸಾವಿರ ದುಡಿಯುತ್ತಿದ್ದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆ ಬಗ್ಗೆ ಯಾವುದೆ ದಾಖಲೆ ಹಾಜರು ಪಡಿಸಿರುವುದಿಲ್ಲ. ಈ ಎಲ್ಲಾ ಕಾರಣಗಳಿಂದ 2 ನೆ ಎದುರುದಾರರು ಪರಿಹಾರ ಕೊಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಓ. ಹೇ. ಕೇ. ಸರಿ ಇದೆ.

ಸಹಿ/ –

1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಜೆ.ಎಂ.ಎಫ್.ಸಿ ರಾಣೇಬೆನ್ನೂರು.